# ಮಂಗಳೂರು ವಿಶ್ವವಿದ್ಯಾನಿಲಯ

**ದಿನಾಂಕ 29.03.2022ರಂದು ಪೂರ್ವಾಹ್ನ ಗಂಟೆ 10:00ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟ್ ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2022ನೇ ಸಾಲಿನ ತೃತೀಯ ಸಾಮಾನ್ಯ ಸಭೆಯ ನಡವಳಿಗಳು.**

**ಉಪಸ್ಥಿತರು**

**ಅನುಪಸ್ಥಿತರು**

## ಪ್ರಾರಂಭಿಕ

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಗಳು ಹಾಗೂ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಸಭೆಗೆ ಸ್ವಾಗತಿಸಿದರು.

- **ಕೃತಜ್ಞತೆ**

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ದ ಪ್ರಕರಣ 28(1)(ಎಫ್) ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟಿಗೆ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ನೆಲೆಯಲ್ಲಿ ನಾಮನಿರ್ದೇಶನಗೊಂಡಿದ್ದ ಶ್ರೀ ಪ್ರಸನ್ನ ಶೆಟ್ಟಿ, ಪ್ರಾಂಶುಪಾಲರು, ಲಕ್ಷ್ಮೀ ಮೆಮೋರಿಯಲ್ ಕಾಲೇಜ್ ಆಫ್ ಹೋಟೇಲ್ ಮ್ಯಾನೇಜ್‌ಮೆಂಟ್, ಮಂಗಳೂರು ಇವರ ಸದಸ್ಯತ್ವದ ಅವಧಿಯು ದಿನಾಂಕ 14.03.2022ರಂದು ಕೊನೆಗೊಂಡಿದ್ದು, ಸದರಿಯವರನ್ನು ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

ಇವರು ತಮ್ಮ ಸಿಂಡಿಕೇಟು ಸದಸ್ಯತ್ವದ ಅವಧಿಯಲ್ಲಿ ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಮತ್ತು ಸಹಕಾರಗಳನ್ನು ನೀಡಿರುವುದಕ್ಕಾಗಿ ಸಿಂಡಿಕೇಟು ಹಾಗೂ ಮಂಗಳೂರು ವಿಶ್ವವಿದ್ಯಾನಿಲಯದ ಪರವಾಗಿ ಕೃತಜ್ಞತಾಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಾಯಿತು.

## ಪ್ರಾಸ್ತಾವಿಕ

ಮಾನ್ಯ ಕುಲಪತಿಗಳು ಈ ಕೆಳಗಿನ ಅಂಶಗಳನ್ನು ಸಭೆಗೆ ತಿಳಿಸಿದರು.

1. ದಿನಾಂಕ 30.03.2022 ರಂದು ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಿದ್ಯಾರ್ಥಿ ಪರಿಷತ್ತು ಇದರ ಉದ್ಘಾಟನಾ ಸಮಾರಂಭವು ವಿಶ್ವವಿದ್ಯಾನಿಲಯದ ಮಂಗಳ ಸಭಾಂಗಣದಲ್ಲಿ ನಡೆಯಲಿದ್ದು, ಸದರಿ ಸಮಾರಂಭಕ್ಕೆ ಡಾ. ಕಲ್ಲಡ್ಕ ಪ್ರಭಾಕರ್ ಭಟ್ ಇವರು ಮುಖ್ಯ ಅತಿಥಿಗಳಾಗಿ ಆಗಮಿಸಿ ಸಮಾರಂಭವನ್ನು ಉದ್ಘಾಟನೆಗೊಳಿಸಲಿರುವ ವಿಷಯವನ್ನು ಸಭೆಗೆ ತಿಳಿಸಿದರು. ದಿನಾಂಕ 28.03.2022 ರಿಂದ 30.03.2022ರ ವರೆಗೆ ವಿಶ್ವವಿದ್ಯಾನಿಲಯದಲ್ಲಿ ಪ್ರತಿಭಾ ಪ್ರದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಂಡಿರುವ ವಿಷಯವನ್ನೂ ಸಭೆಗೆ ತಿಳಿಸಿದರು.
2. ರಾಜ್ಯ ಸರಕಾರದ ನಿರ್ದೇಶನದನ್ವಯ ರಾಷ್ಟ್ರೀಯ ಶಿಕ್ಷಣ ನೀತಿ–2020ರ ಅನ್ವಯ ಪದವಿ ಮಟ್ಟದ ಕಾರ್ಯಕ್ರಮಗಳಿಗೆ ಅಳವಡಿಸಲಾಗಿರುವ Digital Fluency ಕೋರ್ಸಿಗೆ ಸಂಬಂಧಿಸಿ ವಿದ್ಯಾರ್ಥಿಗಳಲ್ಲಿ ಮತ್ತು ಕಾಲೇಜುಗಳ ಪ್ರಾಧ್ಯಾಪಕರುಗಳಲ್ಲಿ ಉಂಟಾಗಿರುವ ಗೊಂದಲಗಳ ಬಗ್ಗೆ ಮಾನ್ಯ ಕುಲಪತಿಯವರು ಸಭೆಗೆ ತಿಳಿಸಿದಾಗ ಸದರಿ ಕೋರ್ಸಿಗೆ ಸಂಬಂಧಿಸಿ ಪಠ್ಯಕ್ರಮಗಳನ್ನು Interdisciplinary ಅಧ್ಯಯನ ಮಂಡಳಿಯನ್ನು ರಚಿಸಿಕೊಂಡು Digital Fluency ಕೋರ್ಸಿಗೆ ಸಂಬಂಧಿಸಿ ಸರಕಾರವು NASSCOM ಸಂಸ್ಥೆಯೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯ ಮಾರ್ಗಸೂಚಿಯಂತೆ CET ಮಾದರಿಯಲ್ಲಿ ಪ್ರಶ್ನೆ ಪತ್ರಿಕೆಗಳನ್ನು ತಯಾರಿಸಿಕೊಂಡು OMR

ಶೀಟುಗಳನ್ನು ಬಳಸಿಕೊಂಡು ಪರೀಕ್ಷೆಗಳನ್ನು ನಡೆಸಲು ಸೂಕ್ತ ಕ್ರಮಕೈಗೊಳ್ಳಲಾಗುವುದೆಂಬುದಾಗಿ ಸಭೆಗೆ ತಿಳಿಸಿದರು.

3. ಮಂಗಳೂರು ವಿಶ್ವವಿದ್ಯಾನಿಲಯದ 40ನೇ ವಾರ್ಷಿಕ ಘಟಿಕೋತ್ಸವವನ್ನು ದಿನಾಂಕ 16.04.2022 ರಂದು ವಿಶ್ವವಿದ್ಯಾನಿಲಯದಲ್ಲಿ ನಡೆಸಲು ನಿರ್ಧರಿಸಲಾಗಿತ್ತು. ಆದರೆ, ಘನತೆವೆತ್ತ ರಾಜ್ಯಪಾಲರು ಸದರಿ ದಿನಾಂಕದಂದು ಕಾರಣಾಂತರಗಳಿಂದ ತಮಗೆ ಭಾಗವಹಿಸಲು ಅನಾನುಕೂಲವಾಗಿದ್ದು ದಿನಾಂಕ 23.04.2022ರಂದು ತಮ್ಮ ಅನುಕೂಲಕರ ದಿನಾಂಕವನ್ನು ತಮ್ಮ ಪತ್ರ ಮುಖೇನ ತಿಳಿಸಿರುವ ವಿಚಾರವನ್ನು ಮಾನ್ಯ ಕುಲಪತಿಗಳು ಸಭೆಯ ಗಮನಕ್ಕೆ ತಂದರು.

   ಆದುದರಿಂದ ವಿಶ್ವವಿದ್ಯಾನಿಲಯದ 40ನೇ ವಾರ್ಷಿಕ ಘಟಿಕೋತ್ಸವವನ್ನು ದಿನಾಂಕ 23.04.2022ರಂದು ಹಮ್ಮಿಕೊಳ್ಳಲು ನಿರ್ಧರಿಸಿ, ಸದರಿ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿರುವ ಜಸ್ಟೀಸ್ ಎಸ್. ಅಬ್ದುಲ್ ನಝೀರ್, ಇವರೊಂದಿಗೂ ಮಾನ್ಯ ರಾಜ್ಯಪಾಲರ ಅನುಕೂಲಕರ ದಿನಾಂಕದ ಬಗ್ಗೆ ಸಮಾಲೋಚಿಸಿಕೊಂಡು ಮುಂದಿನ ನಿರ್ಧಾರ ಕೈಗೊಳ್ಳುವ ಬಗ್ಗೆ ಸಭೆಗೆ ಮಾಹಿತಿ ನೀಡಿದರು.

4. ದಿನಾಂಕ 11.03.2022 ರಿಂದ ದಿನಾಂಕ 16.03.2022 ರವರೆಗೆ ಮಂಗಳೂರು ವಿಶ್ವವಿದ್ಯಾನಿಲಯ ಮತ್ತು ಕರ್ನಾಟಕ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಮುಲ್ಕಿಯಲ್ಲಿ ನಡೆದ ಕೃಷಿಮೇಳವು ಯಶಸ್ವಿಯಾಗಿ ನಡೆದಿದ್ದು, ಈ ಬಗ್ಗೆ ಸಹಕರಿಸಿದ ಎಲ್ಲರಿಗೂ ಮಾನ್ಯ ಕುಲಪತಿಗಳು ಕೃತಜ್ಞತೆಗಳನ್ನು ಸಲ್ಲಿಸಿದರು. ಸದರಿ ಕಾರ್ಯಕ್ರಮದ ಬಗ್ಗೆ ರಾಜರ್ಷಿ ಡಾ. ಡಿ. ವಿರೇಂದ್ರ ಹೆಗ್ಗಡೆಯವರು ಮಾತನಾಡುತ್ತಾ ಮಂಗಳೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿ ತುಳು ಗ್ರಾಮವನ್ನು ಸ್ಥಾಪನೆ ಮಾಡುವ ಬಗ್ಗೆ ಪ್ರಸ್ತಾಪಿಸಿರುವ ವಿಷಯವನ್ನು ಸಭೆಗೆ ತಿಳಿಸಿದರು.

### 1. ನಡವಳಿಗಳ ದೃಢೀಕರಣ

1. ದಿನಾಂಕ 28.02.2022ರಂದು ನಡೆದ ಸಿಂಡಿಕೇಟಿನ 2022ನೇ ಸಾಲಿನ ದ್ವಿತೀಯ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ.

   **– ದೃಢೀಕರಿಸಲಾಯಿತು. –**

2. ದಿನಾಂಕ 11.03.2022ರಂದು ನಡೆದ ಸಿಂಡಿಕೇಟಿನ 2022ನೇ ಸಾಲಿನ ಪ್ರಥಮ ವಿಶೇಷ ಸಭೆಯ ನಡವಳಿಯ ದೃಢೀಕರಣ.

   **– ದೃಢೀಕರಿಸಲಾಯಿತು. –**

## II. ಅನುಸರಣಾ ವರದಿಯ ಅನುಮೋದನೆ

ದಿನಾಂಕ 28.01.2022 ರಂದು ನಡೆದ **ಸಿಂಡಿಕೇಟಿನ 2022ನೇ ಸಾಲಿನ ಪ್ರಥಮ ಸಾಮಾನ್ಯ ಸಭೆಯ** ನಿರ್ಣಯದ ಮೇಲೆ ತೆಗೆದುಕೊಂಡ ಕ್ರಮದ ಅನುಸರಣಾ ವರದಿಯ ಅನುಮೋದನೆ.

– ಅನುಮೋದಿಸಲಾಯಿತು. –

## I. ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು:

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಎಸಿಸಿ:ಸಾಸ.3:1(2022) |
| **ವಿಷಯ:** | ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜನೆಗೊಳಪಟ್ಟ ಸಂಸ್ಥೆಗಳನ್ನು ಸಂಶೋಧನಾ ಕೇಂದ್ರವನ್ನಾಗಿ ಗುರುತಿಸಿ ಮಾನ್ಯತೆ ನೀಡುವ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು.<br>ಮುಂದುವರಿದು, ಎಲ್ಲಾ ಸಂಶೋಧನಾ ಕೇಂದ್ರಗಳು ತಮ್ಮ ಕೇಂದ್ರಗಳಿಂದ |

ಬಿಡುಗಡೆಮಾಡುವ ಸಂಶೋಧನಾ ಪ್ರಬಂಧ ಹಾಗೂ ಸಂಶೋಧನೆಗಳಿಗೆ ಸಂಬಂಧಿಸಿದ ಇನ್ನಿತರ ಎಲ್ಲಾ ವಿಷಯಗಳಲ್ಲಿ ತನ್ನ ಸಂಸ್ಥೆಯ ಹೆಸರಿನ ಜೊತೆಗೆ ಮಂಗಳೂರು ವಿಶ್ವವಿದ್ಯಾನಿಲಯದ ಹೆಸರನ್ನು ದಾಖಲಿಸಬೇಕೆಂಬುದಾಗಿ ಸದರಿ ಸಂಸ್ಥೆಗಳಿಗೆ ಸೂಚಿಸಬೇಕೆಂಬುದಾಗಿಯೂ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಸಾಸ.3:2(2022)
**ವಿಷಯ:** ಡಾ. ನಿಟ್ಟೆ ಶಂಕರ ಅಡ್ಯಂತಾಯ ಮೆಮೋರಿಯಲ್ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆಸಲ್ಪಡುವ ಕಾರ್ಯಕ್ರಮಗಳನ್ನು ನಿಟ್ಟೆ (Deemed to be University) ವರ್ಗಾಯಿಸುವ ಬಗ್ಗೆ.
**ನಿರ್ಣಯ:** ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಸಾಸ.3:3(2022)
**ವಿಷಯ:** ಕಾಲೇಜುಗಳ / ವಿದ್ಯಾಸಂಸ್ಥೆಗಳ ತಾತ್ಕಾಲಿಕ ಸಂಯೋಜನೆಯ ಅನುಶಾಸನದ ಪರಿಷ್ಕರಣೆಯ ಬಗ್ಗೆ
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಸಾಸ.3:4(2022)
**ವಿಷಯ:** ಅಕ್ಷಯ ಕಾಲೇಜು, ಪುತ್ತೂರು (ಹಿಂದಿನ ಗ್ಲೋರಿಯಾ ಕಾಲೇಜು) ಎಂಬ ವಿದ್ಯಾಸಂಸ್ಥೆಯ ಸ್ಥಳ ಬದಲಾವಣೆ ಬಗ್ಗೆ.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾಸ.3:5(2022)
**ವಿಷಯ:** ಪದವಿ ಮಟ್ಟದ ಹೋಮ್ ಸೈನ್ಸ್ ಅಧ್ಯಯನ ಮಂಡಳಿಯ ಪುನರ್ ರಚನೆಯ ಬಗ್ಗೆ.
**ನಿರ್ಣಯ:** ಪದವಿ ಮಟ್ಟದ ಹೋಮ್ ಸೈನ್ಸ್ ಅಧ್ಯಯನ ಮಂಡಳಿಯ ಪುನರ್ ರಚನೆಯ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾಸ.3:6(2022)
**ವಿಷಯ:** ಪದವಿ ಮಟ್ಟದ ಪ್ರಾಣಿಶಾಸ್ತ್ರ ಅಧ್ಯಯನ ಮಂಡಳಿಯ ಪುನರ್ ರಚನೆಯ ಬಗ್ಗೆ.
**ನಿರ್ಣಯ:** ಪದವಿ ಮಟ್ಟದ ಪ್ರಾಣಿಶಾಸ್ತ್ರ ಅಧ್ಯಯನ ಮಂಡಳಿಯ ಪುನರ್ ರಚನೆಯ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾಸ.3:7(2022)
**ವಿಷಯ:** ಕುವೆಂಪು ವಿಶ್ವವಿದ್ಯಾನಿಲಯದ ಕುಲಸಚಿವ (ಮೌಲ್ಯಮಾಪನ) ಹುದ್ದೆಗೆ ಡಾ. ನವೀನ್ ಕುಮಾರ್ ಎಸ್.ಕೆ. ಪ್ರಾಧ್ಯಾಪಕರು, ಸ್ನಾತಕೋತ್ತರ ಇಲೆಕ್ಟ್ರಾನಿಕ್ಸ್ ವಿಭಾಗ ಇವರ ನೇಮಕಾತಿ, ಕರ್ತವ್ಯದಿಂದ ಬಿಡುಗಡೆ ಹಾಗೂ ಹುದ್ದೆಯ ಹಕ್ಕು ಸ್ವಾಮ್ಯ ನೀಡುವ ಬಗ್ಗೆ.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾಸ.3:8(2022)
**ವಿಷಯ:** ಡಾ. ಬೃಂದಾ ವೀರಪ್ಪ, ಸಹ ಪ್ರಾಧ್ಯಾಪಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರು ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಸೇವೆ ಸಲ್ಲಿಸಿದ ಅವಧಿಯ ಪಿಂಚಣಿ ವಂತಿಗೆಯನ್ನು ತುಮಕೂರು ವಿಶ್ವವಿದ್ಯಾನಿಲಯಕ್ಕೆ ವರ್ಗಾಯಿಸಿರುವುದಕ್ಕೆ ಸಿಂಡಿಕೇಟು ಸಭೆಯ ಘಟನೋತ್ತರ ಅನುಮೋದನೆ ಪಡೆಯುವ ಬಗ್ಗೆ.
**ನಿರ್ಣಯ:** ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾಸ.3:9(2022)
**ವಿಷಯ:** ಪ್ರೊ. ವಿಶ್ವನಾಥ್, ಪ್ರಾಧ್ಯಾಪಕರು, ಅರ್ಥಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರ ನೇಮಕಾತಿಯಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ಬಗ್ಗೆ ಸರ್ಕಾರದ ಪತ್ರದ ನಿರ್ದೇಶನದಂತೆ ವಿಶ್ವವಿದ್ಯಾನಿಲಯದ ಹಂತದಲ್ಲಿಯೇ ಕ್ರಮಕೈಗೊಳ್ಳುವ ಬಗ್ಗೆ.
**ನಿರ್ಣಯ:** ವಿಸ್ತೃತ ಚರ್ಚೆಯ ಅಗತ್ಯವಿರುವುದರಿಂದ ಪ್ರಸ್ತಾವನೆಯನ್ನು ಮುಂದೂಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ:ಸಾಸ.3:10(2022)
**ವಿಷಯ:** ಪಿ.ಹೆಚ್‌ಡಿ. ಪದವಿ ಪ್ರದಾನ ಮಾಡಿದ ಬಗ್ಗೆ.
**ನಿರ್ಣಯ:** ಅವಗಾಹನಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಕಾನೂನು ಘಟಕ:ಸಾಸ.3:11(2022)
**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ದಾಖಲೆಗಳಲ್ಲಿ ತನ್ನ ಹೆಸರನ್ನು Chitharanjan ಎಂಬುದರ ಬದಲಾಗಿ Ruben Chittaranjan D'Souza ಎಂದು ತಿದ್ದುಪಡಿಗೊಳಿಸಲು ವಿಶ್ವವಿದ್ಯಾನಿಲಯಕ್ಕೆ ಸೂಕ್ತ ನಿರ್ದೇಶನ ನೀಡಬೇಕೆಂದು Ruben Chittaranjan D'Souza ಇವರು ಮಂಗಳೂರಿನ ಸಿಟಿ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯದಲ್ಲಿ ವಿಶ್ವವಿದ್ಯಾನಿಲಯ ಹಾಗೂ ಇತರರ ವಿರುದ್ಧ ಹೂಡಿರುವ ದಾವೆ (O.S.No:317/2020) ಗೆ ಸಂಬಂಧಿಸಿದ ಆಕ್ಷೇಪಣಾ ಹೇಳಿಕೆಗಳ ಘಟನೋತ್ತರ ಅನುಮೋದನೆ ಬಗ್ಗೆ.
**ನಿರ್ಣಯ:** ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಕಾನೂನು ಘಟಕ:ಸಾಸ.3:12(2022)
**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಾದ ಶ್ರೀ ಶ್ರೀರಾಜ್ ಬಿ.ಎಸ್. ಹಾಗೂ ಇತರರು ತಮ್ಮ ಸೇವೆಯನ್ನು ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಖಾಯಂಗೊಳಿಸಬೇಕೆಂದು ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ವಿಶ್ವವಿದ್ಯಾನಿಲಯ ಹಾಗೂ ಇತರರ ವಿರುದ್ಧ ಹೂಡಿರುವ ರಿಟ್ ಅರ್ಜಿ ಸಂಖ್ಯೆ: 15605/2021 ಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ಹೂಡಲಾಗಿರುವ ಆಕ್ಷೇಪಣಾ ಹೇಳಿಕೆಗಳ ಘಟನೋತ್ತರ ಅನುಮೋದನೆ ಬಗ್ಗೆ
**ನಿರ್ಣಯ:** ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ:ಸಾಸ.3:13(2022)

**ವಿಷಯ:** ಯುವ ರೆಡ್ ಕ್ರಾಸ್‌ನ ಶತಮಾನೋತ್ಸವ ಕಟ್ಟಡ ನಿರ್ಮಾಣದ ಪ್ರಸ್ತಾವನೆಗೆ ಮಂಗಳೂರು ವಿಶ್ವವಿದ್ಯಾನಿಲಯದಿಂದ ಅನುದಾನ ನೀಡುವ ಬಗ್ಗೆ.

**ನಿರ್ಣಯ:** ಸದರಿ ಸಭಾಂಗಣವನ್ನು ವಿಶ್ವವಿದ್ಯಾನಿಲಯದ ಕಾರ್ಯಕ್ರಮಗಳಿಗೆ ಉಚಿತವಾಗಿ ನೀಡುವ ಷರತ್ತಿನೊಂದಿಗೆ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

ಈ ಬಗ್ಗೆ ಸಂಸ್ಥೆಯೊಂದಿಗೆ ಸೂಕ್ತ ಒಡಂಬಡಿಕೆ (MOU) ಮಾಡಿಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಸಾಸ.3:14(2022)

**ವಿಷಯ:** ಸ್ಕೂಲ್ ಆಫ್ ಸೋಷಿಯಲ್ ವರ್ಕ್, ರೋಶನಿ ನಿಲಯ (ಸ್ವಾಯತ್ತ), ಮಂಗಳೂರು ಇಲ್ಲಿ ಸ್ನಾತಕೋತ್ತರ ಕಾರ್ಯಕ್ರಮಕ್ಕೆ 10 ಹೆಚ್ಚುವರಿ ವಿದ್ಯಾರ್ಥಿ ಪರಿಮಿತಿ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಸಾಸ.3:15(2022)

**ವಿಷಯ:** ಸಂತ ಆಗ್ನೇಸ್ ಕಾಲೇಜು, (ಸ್ವಾಯತ್ತ), ಮಂಗಳೂರು ಇಲ್ಲಿ ಶೈಕ್ಷಣಿಕ ವರ್ಷ 2021–22ನೇ ಸಾಲಿಗೆ ಬಿ.ಸಿ.ಎ. ಕಾರ್ಯಕ್ರಮಕ್ಕೆ 40 ವಿದ್ಯಾರ್ಥಿ ಪರಿಮಿತಿಯ ಹೆಚ್ಚುವರಿ ವಿಭಾಗಕ್ಕೆ ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಸಾಸ.3:16(2022)

**ವಿಷಯ:** ಘಟಿಕೋತ್ಸವ ಕಾರ್ಯಕ್ರಮವನ್ನು ನಿಯಂತ್ರಿಸುವ ಪರಿನಿಯಮಕ್ಕೆ ತಿದ್ದುಪಡಿ – ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಅಭಿವೃದ್ಧಿ:ಸಾಸ.3:17(2022)

**ವಿಷಯ:** CARRT ಕೇಂದ್ರದ ಉಪಕರಣಗಳ ಬಳಕೆಗೆ ನಿಗದಿಪಡಿಸಿರುವ ಶುಲ್ಕ ಪರಿಷ್ಕರಣೆಯ ಪ್ರಸ್ತಾವನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾಸ.3:18(2022)

**ವಿಷಯ:** ಡಾ. ಐರಾಣಿ ಮೊಹಮ್ಮದ್ ಖಾನ್, ಹಿಂದಿನ ಕುಲಸಚಿವರು ಹಾಗೂ ಪ್ರಾಧ್ಯಾಪಕರು, ಇಲೆಕ್ಟ್ರಾನಿಕ್ಸ್ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರ ಮೇಲಿನ ಕರ್ತವ್ಯ ಲೋಪದ ಆರೋಪದ ಬಗೆಗಿನ ಇಲಾಖಾ ವಿಚಾರಣೆಯ ವರದಿ/ನಡವಳಿ ಕುರಿತು.

**ನಿರ್ಣಯ:** ಪ್ರಸ್ತಾವನೆಯನ್ನು ವಿಸ್ತೃತವಾಗಿ ಚರ್ಚಿಸಲಾಯಿತು. ಅಂತಿಮವಾಗಿ ಸದರಿ ಪ್ರಕರಣದ ಬಗ್ಗೆ ಇಲಾಖಾ ವಿಚಾರಣಾಧಿಕಾರಿಯವರು ಸಲ್ಲಿಸಿರುವ ವರದಿಯನ್ನು ಸರಕಾರಕ್ಕೆ ಸಲ್ಲಿಸಿ, ಈ ಕುರಿತು ಮುಂದಿನ ಕ್ರಮಕ್ಕೈಗೊಳ್ಳುವ ಬಗ್ಗೆ ಸಲಹೆಯನ್ನು ಕೋರಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾಸ.3:19(2022)

**ವಿಷಯ:** ಡಾ. ಅರಬಿ ಯು., ಪ್ರಾಧ್ಯಾಪಕರು, ಅರ್ಥಶಾಸ್ತ್ರ ವಿಭಾಗ ಇವರಿಗೆ ಸೇವಾ ಸವಲತ್ತುಗಳನ್ನು ವಿಸ್ತರಿಸಿರುವ ಬಗ್ಗೆ – ಘಟನೋತ್ತರ ಅನುಮೋದನೆ ಕುರಿತು.

**ನಿರ್ಣಯ:** ಪ್ರಸ್ತಾವನೆಯನ್ನು ಚರ್ಚಿಸಲಾಯಿತು. ಪ್ರಸ್ತಾವನೆಗೆ ಸಂಬಂಧಿಸಿ, ಪ್ರಸ್ತುತ ನ್ಯಾಯಾಲಯದಿಂದ ಅಂತಿಮ ತೀರ್ಪು ಪ್ರಕಟಗೊಳ್ಳಲು ಬಾಕಿ ಇರುವುದರಿಂದ ನ್ಯಾಯಾಲಯವು ತೀರ್ಪು ಪ್ರಕಟಿಸಿದ ನಂತರ ತೀರ್ಪಿನನುಸಾರ ಸೂಕ್ತ ಕಾನೂನು ಕ್ರಮ ಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾಸ.3:20(2022)

**ವಿಷಯ:** ಡಾ. ಅರಬಿ ಯು., ಪ್ರಾಧ್ಯಾಪಕರು, ಅರ್ಥಶಾಸ್ತ್ರ ವಿಭಾಗ, ಇವರ ಮೇಲೆ ಇಲಾಖಾ ವಿಚಾರಣೆ ನಡೆಸಲು ಕ್ರಮ ಕೈಗೊಂಡ ಬಗ್ಗೆ – ಘಟನೋತ್ತರ ಅನುಮೋದನೆ ಕುರಿತು.

**ನಿರ್ಣಯ:** ಪ್ರಸ್ತಾವನೆಯನ್ನು ಚರ್ಚಿಸಲಾಯಿತು. ಪ್ರಸ್ತಾವನೆಗೆ ಸಂಬಂಧಿಸಿ, ಪ್ರಸ್ತುತ ನ್ಯಾಯಾಲಯದಿಂದ ಅಂತಿಮ ತೀರ್ಪು ಪ್ರಕಟಗೊಳ್ಳಲು ಬಾಕಿ ಇರುವುದರಿಂದ ನ್ಯಾಯಾಲಯವು ತೀರ್ಪು ಪ್ರಕಟಿಸಿದ ನಂತರ ತೀರ್ಪಿನನುಸಾರ ಸೂಕ್ತ ಕಾನೂನು ಕ್ರಮ ಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾಸ.3:21(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯ ಮತ್ತು Mangalore Institute of Oncology, Mangalore ಮಧ್ಯೆ ಮಾಡಿಕೊಳ್ಳುವ ಒಡಂಬಡಿಕೆಯ ಅವಧಿ ವಿಸ್ತರಿಸುವ ಕುರಿತು.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾಸ.3:22(2022)

**ವಿಷಯ:** ನ್ಯಾಕ್ ಮಾರ್ಗಸೂಚಿಯನುಸಾರ 2020–21ರ Annual Quality Asurance Report (AQAR) ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಹಣಕಾಸು:ಸಾಸ.3:23(2022)

**ವಿಷಯ:** ನಿರ್ದೇಶಕರು, ದೈಹಿಕ ಶಿಕ್ಷಣ ವಿಭಾಗ, ಇವರು ಸವಿವರ ಸಾದಿಲ್ವಾರು ಬಿಲ್ಲುಗಳನ್ನು ಸಲ್ಲಿಸಲು ಬಾಕಿ ಇರುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ವಿಸ್ತೃತವಾಗಿ ಚರ್ಚಿಸಲಾಯಿತು. ಈವರೆಗೆ ಮುಂಗಡ ಪಡೆದುಕೊಂಡಿರುವ ಬಿಲ್ಲುಗಳಿಗೆ ಹೊಂದಾಣಿಕೆ ಬಿಲ್ಲುಗಳನ್ನು ಸಲ್ಲಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಮುಂದುವರಿದು, ದೈಹಿಕ ಶಿಕ್ಷಣ ಮತ್ತು ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲಯಗಳಿಗೆ ಕಾರ್ಯಕ್ರಮಗಳನ್ನು ನಡೆಸಲು ಕಾರ್ಯಕ್ರಮಗಳ ಖರ್ಚುವೆಚ್ಚಗಳ ಅಂದಾಜುಪಟ್ಟಿಯನ್ನು ಮೂರು ತಿಂಗಳ ಮುಂಚಿತವಾಗಿ ನಿಯಮಾನುಸಾರವಾಗಿ ಸಲ್ಲಿಸಿ, ಸೂಕ್ತ ಮುಂಗಡವನ್ನು ಮಂಜೂರು ಮಾಡಲು ಕ್ರಮಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿ೯ವಿ:ಸಾಸ.3:24(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ವಿಜ್ಞಾನ ವಿಭಾಗಗಳಿಗೆ ರಾಸಾಯನಿಕ ಮತ್ತು ಗ್ಲಾಸ್‌ವೇರ್‌ಗಳನ್ನು ಖರೀದಿಸಲು ಟೆಂಡರ್ ವ್ಯವಸ್ಥೆ ಬದಲಾಗಿ ಪ್ರಸ್ತುತವಿರುವ ದರಪಟ್ಟಿ ಆಹ್ವಾನಿಸುವ ಮಾದರಿಯಲ್ಲಿ ಮುಂದುವರಿಸಲು ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಕೂಲಂಕುಷವಾಗಿ ಚರ್ಚಿಸಲಾಯಿತು. ಪ್ರಸ್ತಾವನೆಯಲ್ಲಿ ನಮೂದಿಸಿರುವಂತೆ, ಕರ್ನಾಟಕ ಪಾರದರ್ಶಕತೆ ಕಾಯಿದೆ (KTPP) ಯ ಪಾರಾ 4 (ಜಿ) ಯಡಿ ವಿನಾಯಿತಿ ಪಡೆಯಲು ಸರಕಾರಕ್ಕೆ ಪತ್ರ ಬರೆಯಲು ಕ್ರಮ ಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. ಅಲ್ಲಿಯವರೆಗೆ ಯಥಾಸ್ಥಿತಿಯನ್ನು ಕಾಯ್ದುಕೊಳ್ಳಲು ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾಸ.3:25(2022)

**ವಿಷಯ:** ಡಾ. ಶಾಮಸುಂದರ್ ಜೆ., ಸಹಾಯಕ ಪ್ರಾಧ್ಯಾಪಕರು, ಇವರ ಮೇಲಿನ ಇಲಾಖಾ ವಿಚಾರಣೆ– ದಂಡನೆ ಆದೇಶವನ್ನು ಪುನರ್ ಪರಿಶೀಲಿಸಿ ದೋಷಮುಕ್ತಗೊಳಿಸುವಂತೆ ಹಾಗೂ ತಡೆಹಿಡಿಯಲಾದ ವೇತನ ಭಡ್ತಿ ಹಾಗೂ ವೇತನ ಬಾಕಿ ಮೊತ್ತವನ್ನು ನೀಡುವಂತೆ ಸಲ್ಲಿಸಿರುವ ಮನವಿಯ ಬಗ್ಗೆ.

**ನಿರ್ಣಯ:** ಡಾ. ಶಾಮಸುಂದರ್ ಜೆ., ಇವರ ಮನವಿಯನ್ನು ಪರಿಶೀಲಿಸಲಾಯಿತು. ಆದರೆ, ಸದರಿಯವರ ಮನವಿಯನ್ನು ಪುನರಾವಲೋಕಿಸಲು (Review) ಅಗತ್ಯವಿರುವ ಆಧಾರ (grounds)ವಿಲ್ಲದಿರುವುದರಿಂದ ಸದರಿಯವರ ಮನವಿಯನ್ನು ಸಿಂಡಿಕೇಟು ತಿರಸ್ಕರಿಸಿ, ಪ್ರಸ್ತಾವನೆಯನ್ನು ಕೈಬಿಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾಸ.3:26(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಬೋಧಕೇತರ ಹುದ್ದೆಗಳ (ಆಡಳಿತ, ಲಿಪಿಕ ಮತ್ತು ಇನ್ನಿತರ ಬೋಧಕೇತರ ಹುದ್ದೆಗಳು) ವೃಂದ ಮತ್ತು ನೇಮಕಾತಿ ನಿಯಮಗಳ ಕ್ರೋಢೀಕೃತ ಪರಿಷ್ಕೃತ ಪರಿನಿಯಮದ ಅನುಮೋದನೆ ಬಗ್ಗೆ.

**ನಿರ್ಣಯ:** ವಿಸ್ತೃತ ಚರ್ಚೆಯ ಅಗತ್ಯವಿರುವುದರಿಂದ ಪ್ರಸ್ತಾವನೆಯನ್ನು ಮುಂದೂಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾಸ.3:27(2022)

**ವಿಷಯ:** ಡಾ. ಅಣ್ಣಯ್ಯ ರಮೇಶ್, ಸಹಾಯಕ ಪ್ರಾಧ್ಯಾಪಕರು, ಅನ್ವಯಿಕ ಸಸ್ಯಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯದ ಇವರ ಮೇಲಿನ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ಕುರಿತು.

**ನಿರ್ಣಯ:** ಪ್ರಸ್ತಾವನೆಯನ್ನು ವಿಸ್ತೃತವಾಗಿ ಚರ್ಚಿಸಲಾಯಿತು. ದಾಖಲೆಗಳನ್ನು ಪರಿಶೀಲಿಸಲಾಯಿತು. ಪ್ರಕರಣವು ಇಲಾಖಾ ವಿಚಾರಣೆಗೆ ಅರ್ಹವಲ್ಲವೆಂದು ಸಿಂಡಿಕೇಟು ಪರಿಗಣಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾಸ.3:28(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಗಣಕ ಯಂತ್ರ ಕೇಂದ್ರಕ್ಕೆ ಮಂಜೂರಾದ ಎರಡು ಕಂಪ್ಯೂಟರ್ ಆಪರೇಟರ್ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ವೇತನ ಶ್ರೇಣಿ ನಿಗದಿ ಬಗ್ಗೆ.

**ನಿರ್ಣಯ:** ವೇತನ ಪರಿಷ್ಕರಣೆಯನ್ನು ಅನುಮೋದಿಸಲಾಯಿತು.

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಹಣಕಾಸು:ಸಾಸ.3:29(2022) |
| **ವಿಷಯ:** | ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಆಂತರಿಕ ಲೆಕ್ಕಪರಿಶೋಧನೆ Double Entry System of Book Keeping ಗೆ ಸಂಬಂಧಿಸಿದಕ್ಕೆ ಕರಡು ಮಾರ್ಗಸೂಚಿಯ ಅನುಮೋದನೆ ಬಗ್ಗೆ. |
| **ನಿರ್ಣಯ:** | ಕರಡು ನೀತಿ ಮತ್ತು ಮಾರ್ಗಸೂಚಿಯನ್ನು ಪರಿಷ್ಕರಿಸಿ ಅನುಮೋದಿಸಲಾಯಿತು. ಮುಂದುವರಿದು, ದಿನಾಂಕ 31.05.2022ರೊಳಗೆ Double Entry System of Book Keeping ವ್ಯವಸ್ಥೆಯನ್ನು ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಅಳವಡಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಸಿಂಡಿಕೇಟು:ಸಾಸ.3:30(2022) |
| **ವಿಷಯ:** | ಡಿಪ್ಲೋಮಾ ಇನ್ ಫೈರ್ & ಇಂಡಸ್ಟ್ರಿಯಲ್ ಸೇಫ್ಟಿ ಅಧ್ಯಯನ ಮಂಡಳಿಯ ಪುನರ್ ರಚನೆಯ ಬಗ್ಗೆ. |
| **ನಿರ್ಣಯ:** | ಡಿಪ್ಲೋಮಾ ಇನ್ ಫೈರ್ & ಇಂಡಸ್ಟ್ರಿಯಲ್ ಸೇಫ್ಟಿ ಅಧ್ಯಯನ ಮಂಡಳಿಯನ್ನು ಪುನರ್ ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಸಿಬ್ಬಂದಿ:ಸಾಸ.3:31(2022) |
| **ವಿಷಯ:** | ದಿನಾಂಕ 21.04.2020ರಂದು ಪ್ರಕಟಿಸಲಾದ ಮಂಗಳೂರು ವಿಶ್ವವಿದ್ಯಾನಿಲಯದ ಬೋಧಕೇತರ ಸಿಬ್ಬಂದಿಗಳ ತಾತ್ಕಾಲಿಕ ಜೇಷ್ಠತಾ ಪಟ್ಟಿಗಳನ್ನು ಅಂತಿಮಗೊಳಿಸುವ ಬಗ್ಗೆ ಹಾಗೂ ಈ ಬಗ್ಗೆ ಬಂದಿರುವ ಆಕ್ಷೇಪಣೆಗಳಿಗೆ ಉತ್ತರಿಸುವ ಬಗ್ಗೆ. |
| **ನಿರ್ಣಯ:** | ದಿನಾಂಕ 21.04.2020ರ ಕರಡು (provisional) ಜೇಷ್ಠತಾ ಪಟ್ಟಿಯನ್ನು ಅಂತಿಮಪಟ್ಟಿಯಾಗಿ ಈ ಕೆಳಗಿನ ಷರತ್ತಿಗೊಳಪಟ್ಟು ಅನುಮೋದಿಸಲಾಯಿತು.<br>1. 1978ರ ಸರ್ಕಾರದ ಆದೇಶದಂತೆ ಜೇಷ್ಠತಾ ಪಟ್ಟಿಯನ್ನು ಪರಿಷ್ಕರಿಸಿ, ಮೂರು ತಿಂಗಳ ಕಾಲಾವಧಿಯೊಳಗೆ ಪ್ರಕಟಿಸಲು ಕ್ರಮ ಕೈಗೊಳ್ಳುವುದು.<br>2. ಈ ಕುರಿತು ಬಂದಿರುವ ಎಲ್ಲಾ ಆಕ್ಷೇಪಣೆಗಳನ್ನು ಪರಿಗಣಿಸಿ, ಸೂಕ್ತ ಉತ್ತರಗಳನ್ನು ನೀಡಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಸಿಂಡಿಕೇಟು:ಸಾಸ.3:32(2022) |
| **ವಿಷಯ:** | ವಿಶ್ವವಿದ್ಯಾನಿಲಯದ ಸಂಧ್ಯಾ ಕಾಲೇಜು, ಮಂಗಳೂರು ಮತ್ತು ದೂರಶಿಕ್ಷಣ ಕೇಂದ್ರ, ಮಂಗಳೂರು ಇಲ್ಲಿನ ಲೋಪ ದೋಷಗಳ ಕುರಿತು – ತನಿಖಾ ವರದಿಯ ಬಗ್ಗೆ. |
| **ನಿರ್ಣಯ:** | ವಿಸ್ತೃತ ಚರ್ಚೆಯ ಅಗತ್ಯವಿರುವುದರಿಂದ ಪ್ರಸ್ತಾವನೆಯನ್ನು ಮುಂದೂಡಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಸಿಂಡಿಕೇಟು:ಸಾಸ.3:33(2022) |
| **ವಿಷಯ:** | ಡಾ. ಪಾರ್ವತಿ ಅಪ್ಪಯ್ಯ, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ ಬಗ್ಗೆ. |
| **ವಿಷಯ 1.** | Requesting the University to builkd classrooms and staff rooms to accommodate the students and teachers for Kodava studies (Certificate, Diploma, Advanced Diploma, P.G. Diploma, Graduate and Post Graduate Degree Courses). Alternately a separate building may be built for Kodava Adhyayana Peeta accommodating everything in one centre since the decision is taken to shift the Kodava Study centre from Mangalagangothri to Madikeri |

| | |
|---|---|
| **ನಿರ್ಣಯ:** | ಕ್ಲಾಸ್‌ರೂಮ್ ಗಳನ್ನು ನಿರ್ಮಾಣ ಮಾಡಲು ಸೂಕ್ತ ಕ್ರಮಕೈಗೊಳ್ಳಲಾಗುವುದೆಂಬುದಾಗಿ ತಿಳಿಸಲಾಯಿತು. ಕೊಡವ ಅಧ್ಯಯನ ಪೀಠವನ್ನು ಮಂಗಳಗಂಗೋತ್ರಿ ಕ್ಯಾಂಪಸ್‌ನಿಂದ ಮಡಿಕೇರಿಗೆ ಸ್ಥಳಾಂತರ ಮಾಡಲು ಈ ಹಂತದಲ್ಲಿ ಸಾಧ್ಯವಿಲ್ಲವೆಂಬುದಾಗಿ ತಿಳಿಸಲಾಯಿತು. |
| **ವಿಷಯ 2.** | Requesting the University to place before the Syndicate – The report of the committee in the sexual Herrassement case of Dr. Jagannath of Physics Department of FMKMC , Madikeri |
| **ನಿರ್ಣಯ:** | ವಿಸ್ತೃತ ಚರ್ಚೆಯ ಅಗತ್ಯವಿರುವುದರಿಂದ ಪ್ರಸ್ತಾವನೆಯನ್ನು ಮುಂದೂಡಲಾಯಿತು. |
| **ವಿಷಯ 3.** | Transfer back the teacher who are transferred to Mangalore University/ University College without proper replacement (transfer) to FMKMC. |
| **ನಿರ್ಣಯ:** | ವಿಸ್ತೃತ ಚರ್ಚೆಯ ಅಗತ್ಯವಿರುವುದರಿಂದ ಪ್ರಸ್ತಾವನೆಯನ್ನು ಮುಂದೂಡಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಹಣಕಾಸು:ಸಾಸ.3:34(2022) |
| **ವಿಷಯ:** | ಮಂಗಳೂರು ವಿಶ್ವವಿದ್ಯಾನಿಲಯದ 2022–23ನೇ ಸಾಲಿನ ಆಯವ್ಯಯ ಅಂದಾಜುಗಳು ಮತ್ತು 2021–22ನೇ ಸಾಲಿನ ಪರಿಷ್ಕೃತ ಆಯವ್ಯಯ ಅಂದಾಜುಗಳ ಅನುಮೋದನೆ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಕಾನೂನು ಘಟಕ:ಸಾಸ.3:35(2022) |
| **ವಿಷಯ:** | ಮಂಗಳೂರು ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳಾದ ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಮತ್ತು ಫೀಲ್ಡ್ ಮಾರ್ಷಲ್ ಕೆ. ಎಂ. ಕಾರ್ಯಪ್ಪ ಕಾಲೇಜು (ಫೀ.ಮಾ.ಕೆ.ಎಂ.ಕಾ.ಕಾ.) ಮಡಿಕೇರಿ ಇಲ್ಲಿ ಅತಿಥಿ ಉಪನ್ಯಾಸಕ ನೆಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶ್ರೀ ಶ್ರೀರಾಜ್ ಬಿ.ಎಸ್. ಹಾಗೂ ಇತರರರು "ಸಹಾಯಕ ಪ್ರಾಧ್ಯಾಪಕ" ಹುದ್ದೆಯಲ್ಲಿ ಸೇವಾ ಖಾಯಂಮಾತಿ ಕೋರಿ ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ಹೂಡಿರುವ ರಿಟ್ ಅರ್ಜಿ ಸಂಖ್ಯೆ 15605/2021 (S.RES) ಗೆ ಸಂಬಂಧಿಸಿದಂತೆ ನ್ಯಾಯಾಲಯವು ಹೊರಡಿಸಿರುವ ತೀರ್ಪು ದಿನಾಂಕ 05.03.2022ಕ್ಕೆ ಸಂಬಂಧಿಸಿದಂತೆ ಮುಂದಿನ ಸೂಕ್ತ ಕ್ರಮ ಕೈಗೊಳ್ಳುವ ಬಗ್ಗೆ. |
| **ನಿರ್ಣಯ:** | ಪ್ರಸ್ತಾವನೆಯನ್ನು ಕೂಲಂಕಷವಾಗಿ ಚರ್ಚಿಸಲಾಯಿತು.<br>1. ಈ ಬಗ್ಗೆ ಮುಂದಿನ ಕ್ರಮಕ್ಕಾಗಿ ಡಿವಿಜನಲ್ ಬೆಂಚ್‌ಗೆ ಅಪೀಲು ಮಾಡಲು ಸೂಕ್ತ ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.<br>2. ಅರ್ಜಿದಾರರರ ಮನವಿಯನ್ನು ನಿಯಮಾನುಸಾರ ಘನ ರಾಜ್ಯಸರಕಾರಕ್ಕೆ ಸಲ್ಲಿಸಲು ಸಿಂಡಿಕೇಟು ನಿರ್ಣಯಿಸಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಸಿಂಡಿಕೇಟು:ಸಾಸ.3:36(2022) |
| **ವಿಷಯ:** | ಎಂ.ಎಸ್ಸಿ. ಆಡಿಯಾಲಜಿ ಮತ್ತು ಎಂ.ಎಸ್ಸಿ. ಸ್ಪೀಚ್ ಲ್ಯಾಂಗ್ವೇಜ್ ಪಾಥಾಲಜಿ ಸ್ನಾತಕೋತ್ತರ ಕಾರ್ಯಕ್ರಮಗಳಿಗೆ ಅಧ್ಯಯನ ಮಂಡಳಿಗಳ ರಚನೆ ಬಗ್ಗೆ. |
| **ನಿರ್ಣಯ:** | ಅಧ್ಯಯನ ಮಂಡಳಿಗಳನ್ನು ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು. |

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾಸ.3:37(2022)

**ವಿಷಯ:** ಎಂ.ಎಸ್ಸಿ. ಸೈಬರ್ ಸೆಕ್ಯೂರಿಟಿ ಕಾರ್ಯಕ್ರಮ – ಕೈಗಾರಿಕ ಪರಿಣಿತರಿಂದ ಉಪನ್ಯಾಸ ಏರ್ಪಡಿಸಲು ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾಸ.3:38(2022)

**ವಿಷಯ:** ಪ್ರೊ. ಕರುಣಾಕರ್ ಎ. ಕೋಟೆಗಾರ್, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ವಿಸ್ತೃತವಾಗಿ ಚರ್ಚಿಸಲಾಯಿತು. ಸ್ಥಳೀಯ ವಿಚಾರಣಾ ಸಮಿತಿಯು ಕಾಲೇಜುಗಳಿಗೆ ಭೇಟಿ ನೀಡುವ ಸಂದರ್ಭದಲ್ಲಿ ಸರಕಾರದ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸಬೇಕೆಂಬುದಾಗಿ ಕಾಲೇಜುಗಳಿಗೆ ಸೂಚಿಸಲು ಸಿಂಡಿಕೇಟು ನಿರ್ಣಯಿಸಿತು.

ಸದರಿ ವಿದ್ಯಾಸಂಸ್ಥೆಗಳಲ್ಲಿ ಶೈಕ್ಷಣಿಕ ವರ್ಷ 2021–22ನೇ ಸಾಲಿಗೆ ಪ್ರವೇಶಾತಿಗೊಂಡಿರುವ ವಿದ್ಯಾರ್ಥಿಗಳಿಗೆ ಸರಕಾರದ ಅನುಮೋದನೆಯ ನಿರೀಕ್ಷೆ ಮೇರೆಗೆ ಪರೀಕ್ಷೆಗಳಿಗೆ ಹಾಜರಾಗಲು ಅನುಮತಿ ನೀಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಇತರ ವಿಷಯಗಳು:**

1. ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಸೇರಿದ ಸ್ಥಿರಾಸ್ತಿಗಳನ್ನು ಅತಿಕ್ರಮಣಗೊಳಿಸಿರುವ ಬಗ್ಗೆ ಸರ್ವೆ ಇಲಾಖೆಯಿಂದ ಅಳತೆ ಮಾಡಿಸಿ, ಅತಿಕ್ರಮಣವನ್ನು ಗುರುತಿಸಿ, ವಿಶ್ವವಿದ್ಯಾನಿಲಯದ ಭೂಮಿಯನ್ನು ಅತಿಕ್ರಮಣದಿಂದ ತೆರವುಗೊಳಿಸಿ, ಅತಿಕ್ರಮಗೊಳಿಸಿದ ಜಾಗದಲ್ಲಿ ಈಗಾಗಲೇ ನಿರ್ಮಿಸಿದ ಅನಧಿಕೃತ ಕಟ್ಟಡಗಳನ್ನು ನೆಲಸಮ ಮಾಡಲು ಕಾನೂನು ಪ್ರಕಾರ ಸೂಕ್ತ ಹಾಗೂ ಶೀಘ್ರ ಕ್ರಮ ಕೈಗೊಳ್ಳಲು ಜಿಲ್ಲಾಧಿಕಾರಿಗಳಿಗೆ ಅರ್ಜಿ ಸಲ್ಲಿಸಲು ನಿರ್ಣಯಿಸಲಾಯಿತು. ಅತಿಕ್ರಮಣ ಮಾಡಿದ ವ್ಯಕ್ತಿಗಳ ವಿರುದ್ಧ "The Karnataka Land Grabbing Prohibition Act 2011" ರನ್ವಯ ಕ್ರಿಮಿನಲ್ ಮೊಕದ್ದಮೆಗಳನ್ನು ದಾಖಲಿಸಲು ನಿರ್ಣಯಿಸಲಾಯಿತು.
2. ದಿನಾಂಕ 11.03.2022ರಂದು ನಡೆದ ಸಿಂಡಿಕೇಟ್ ಸಭೆಯ ಕಾರ್ಯಸೂಚಿ ಸಂಖ್ಯೆ ಸಿಬ್ಬಂದಿ:ವಿ.ಸ.1:33(2022) ರಲ್ಲಿ ಕೈಗೊಂಡಿರುವ ಸೋಲಾರ್, ಬಯೋಮೆಟ್ರಿಕ್ಸ್, ಮತ್ತು ಸಿ.ಸಿ. ಟಿವಿಗೆ ಸಂಬಂಧಿಸಿದ ವಿಚಾರಣೆಯನ್ನು ನಡೆಸಲು ವಿಚಾರಣಾಧಿಕಾರಿಯಾಗಿ ಹೈಕೋರ್ಟ್‌ನ ನಿವೃತ್ತ ನ್ಯಾಯಾಧೀಶರಾದ ಜಸ್ಟಿಸ್ ಎನ್. ಕುಮಾರ್, ಜಸ್ಟಿಸ್. ಜೆ. ಎಂ. ಡಿಕೊನ್ನಾ, ಜಸ್ಟಿಸ್ ನಾಗಮೋಹನ್‌ದಾಸ್, ಜಸ್ಟಿಸ್ ಹಿಂಚಿಗೇರಿಯವರುಗಳ ಹೆಸರುಗಳನ್ನು ಸೂಚಿಸಲಾಯಿತು. ಇವರ ಲಭ್ಯತೆಯನುಸಾರ ನೇಮಕ ಮಾಡುವುದು.
3. ಮಂಗಳೂರು ವಿಶ್ವವಿದ್ಯಾನಿಲಯದಿಂದ ಸರಕಾರದ ಅನುಮೋದನೆ ಸಲ್ಲಿಸಿ, ಸರಕಾರದಿಂದ ಅನುಮೋದನೆಗೊಳ್ಳಲು ಬಾಕಿಯಿರುವ ವಿನಿಯಮ ಮತ್ತು ಪರಿನಿಯಮಗಳ ಕ್ರೋಢೀಕೃತ ಮಾಹಿತಿಯನ್ನು ಸರಕಾರಕ್ಕೆ ಸಲ್ಲಿಸಿರುವ ದಿನಾಂಕ ಹಾಗು ಇತರ ವಿವರಗಳೊಂದಿಗೆ ಮುಂದಿನ ಸಿಂಡಿಕೇಟು ಸಭೆಗೆ ವರದಿ ನೀಡಲು ಕ್ರಮಕೈಗೊಳ್ಳಬೇಕೆಂಬುದಾಗಿ ನಿರ್ಣಯಿಸಲಾಯಿತು.
4. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಮಂಜೂರಾಗಿರುವ ಎಸ್ಟೇಟ್ ಅಧಿಕಾರಿ ಹುದ್ದೆಯನ್ನು ತಾತ್ಕಾಲಿಕ ನೆಲೆಯಲ್ಲಿ ಭರ್ತಿಗೊಳಿಸಲು ಸೂಕ್ತ ಕ್ರಮ ಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.
5. ಪದವಿ ಮತ್ತು ಸ್ನಾತಕೋತ್ತರ ಪದವಿ ಕಾರ್ಯಕ್ರಮಗಳ ಅಂತಿಮ ಸೆಮಿಸ್ಟರುಗಳ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿದ್ದು, ತಮ್ಮ ಅಂಕಪಟ್ಟಿಗಳು ದೊರೆಯದಿರುವುದರಿಂದ ವಿದ್ಯಾರ್ಥಿಗಳಿಗೆ ಘಟಿಕೋತ್ಸವ

ಕಾರ್ಯಕ್ರಮಕ್ಕೆ ಅರ್ಜಿ ಸಲ್ಲಿಸಲು ತೊಂದರೆಯಾಗಿರುವ ವಿಷಯವನ್ನು ಸಿಂಡಿಕೇಟು ಸದಸ್ಯರೋರ್ವರು ಸಭೆಯಲ್ಲಿ ಪ್ರಸ್ತಾಪಿಸಲಾಗಿ, ವಿಶ್ವವಿದ್ಯಾನಿಲಯದ 40 ನೇ ವಾರ್ಷಿಕ ಘಟಿಕೋತ್ಸವ ಕಾರ್ಯಕ್ರಮದಲ್ಲಿ ಪದವಿ ಪ್ರಮಾಣ ಪತ್ರ ಪಡೆಯಲು ಅರ್ಹರಾಗಿರುವ ಎಲ್ಲಾ ವಿದ್ಯಾರ್ಥಿಗಳ ಅಂಕಪಟ್ಟಿಗಳು ಶೀಘ್ರವಾಗಿ ವಿದ್ಯಾರ್ಥಿಗಳಿಗೆ ನೀಡಲು ಸೂಕ್ತ ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

6. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ 2015ರಿಂದ ಪರೀಕ್ಷಾ ಕಾರ್ಯಗಳನ್ನು ನಡೆಸುತ್ತಿರುವ ಮೆ.ಆಟ್ರಿಸ್ ಟೆಕ್ನಾಲಜೀಸ್, ಬೆಂಗಳೂರು ಇವರಿಗೆ ಪಾವತಿಸಲಾದ ಮೊತ್ತದ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ ಕುಲಸಚಿವರು (ಪ) ಇವರು ಮಾತನಾಡುತ್ತಾ ಸದರಿ ಸಂಸ್ಥೆಯಿಂದ ಸ್ವೀಕರಿಸಿದ ದಾಖಲೆಗಳನ್ನು ವಿಶ್ವವಿದ್ಯಾನಿಲಯದ ಪರಿಣಿತರಿಂದ ಪರಿಶೀಲಿಸಲಾಗಿರುತ್ತದೆ ಎಂದು ತಿಳಿಸುತ್ತಾ ಪ್ರಸ್ತುತ MU-Linx ಮೂಲಕ ನಡೆಸಲಾಗುತ್ತಿರುವ ಪರೀಕ್ಷಾ ಕಾರ್ಯದ ಬಗ್ಗೆ ವಿಸ್ತೃತವಾಗಿ ಸಭೆಗೆ ತಿಳಿಸಿದರು. ಸುದೀರ್ಘ ಚರ್ಚೆಯ ಬಳಿಕ ಸಂಸ್ಥೆಯು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಬೇಕಾಗಿರುವ ಎಲ್ಲಾ ದಾಖಲೆಗಳು, ವಿದ್ಯಾರ್ಥಿ ದತ್ತಾಂಶ, ಪರೀಕ್ಷಾ ಫಲಿತಾಂಶದೊಂದಿಗೆ ಲೆಡ್ಜರ್‌ಗಳ Soft Copy ಗಳು, ಹಾಗೂ ಕರಾರಿನಲ್ಲಿ ನಮೂದಿಸಿರುವ ಇನ್ನಿತರ ದಾಖಲೆಗಳನ್ನು ಪಡೆದುಕೊಳ್ಳಲು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸಿಂಡಿಕೇಟು ನಿರ್ಣಯಿಸಿತು. ಸ್ವೀಕೃತವಾದ ಮಾಹಿತಿಗಳನ್ನು multiple confidential storage system ನಲ್ಲಿ ಸಂರಕ್ಷಿಸಲು ಸೂಕ್ತ ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. Consolidated marks card book ಮತ್ತು ಲೆಡ್ಜರ್‌ಗಳ Soft Copy ಗಳ ದಾಖಲೆಗಳನ್ನು ಎಲ್ಲಾ ಕಾಲೇಜುಗಳಿಗೆ ಕಳುಹಿಸಲು ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.
   ಪ್ರಸ್ತುತ ವಿಶ್ವವಿದ್ಯಾನಿಲಯದಲ್ಲಿ ವಿದ್ಯಾರ್ಥಿ ಪ್ರವೇಶಾತಿ ಮತ್ತು ಪರೀಕ್ಷಾ ಕಾರ್ಯಗಳನ್ನು ನಿರ್ವಹಿಸಲು MU-Linx, ಮತ್ತು UUCMS ಸಾಫ್ಟ್‌ವೇರ್‌ಗಳನ್ನು ಬಳಸುತ್ತಿದ್ದು, ಸದರಿ ಸಾಫ್ಟ್‌ವೇರ್‌ಗಳ ಕಾರ್ಯನಿರ್ವಹಣೆಗೆ ಹೊರಗುತ್ತಿಗೆ ಆಧಾರದ ತಾಂತ್ರಿಕ ಸಿಬ್ಬಂದಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಬಳಸಿಕೊಳ್ಳಲಾಗುತ್ತಿದೆ. ಆದರೆ, ಮುಂದಿನ ದಿನಗಳಲ್ಲಿ ವಿಶ್ವವಿದ್ಯಾನಿಲಯದ ಆಡಳಿತಾತ್ಮಕ ಹಿತದೃಷ್ಟಿಯಿಂದ, ಸದರಿ ಸಾಫ್ಟ್‌ವೇರ್‌ಗಳ ಬಳಕೆಯಲ್ಲಿ ವಿಶ್ವವಿದ್ಯಾನಿಲಯದ ಖಾಯಂ ಸಿಬ್ಬಂದಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಬಳಸಿಕೊಳ್ಳಬೇಕೆಂಬುದಾಗಿ ಸಿಂಡಿಕೇಟು ಸರ್ವಾನುಮತದಿಂದ ನಿರ್ಣಯಿಸಿತು.

7. ಮುಂದಿನ ಶೈಕ್ಷಣಿಕ ವರ್ಷಗಳಲ್ಲಿ ವಿಶ್ವವಿದ್ಯಾನಿಲಯದ ಘಟಿಕೋತ್ಸವದಲ್ಲಿ ಪದವಿ ಪ್ರದಾನ ಕಾರ್ಯಕ್ರಮಕ್ಕೆ ಸಲ್ಲಿಸುತ್ತಿರುವ ಅರ್ಜಿಗಳನ್ನು Dual Mode ನಲ್ಲಿ ಸಲ್ಲಿಸಲು ಸೂಕ್ತ ಕ್ರಮಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ಅಭಿಪ್ರಾಯ ಪಟ್ಟಿತು.

8. ಮಂಗಳೂರು ವಿಶ್ವವಿದ್ಯಾನಿಲಯದಿಂದ ವಿದ್ಯಾರ್ಥಿಗಳಿಗೆ ವಿತರಿಸಲಾಗಿರುವ ಅಂಕಪಟ್ಟಿ ಅಥವಾ ಇತರೆ ಶೈಕ್ಷಣಿಕ ದಾಖಲೆಗಳಿಗೆ ಸಂಬಂಧೀಸಿ, ವಿದ್ಯಾರ್ಥಿಗಳು ಮಗದೊಮ್ಮೆ ಸದರಿ ದಾಖಲೆಗಳಿಗೆ ಅರ್ಜಿ ಸಲ್ಲಿಸಿದಾಗ ವಿಶ್ವವಿದ್ಯಾನಿಲಯದಿಂದ ನೀಡಲಾಗುತ್ತಿರುವ ಅಂಕಪಟ್ಟಿ, ಪದವಿ ಪ್ರಮಾಣ ಪತ್ರ ಹಾಗೂ ಇತರೆ ದಾಖಲೆಗಳಲ್ಲಿ Duplicate ಎಂಬ ಶಬ್ದವನ್ನು ಬಳಸಲಾಗುತ್ತಿದ್ದು, ಇದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಗೆ ತೊಂದರೆಯಾಗಿರುವ ಬಗ್ಗೆ ಸಿಂಡಿಕೇಟು ಸದಸ್ಯರೋರ್ವರು ವಿಷಯವನ್ನು ಸಭೆಯ ಗಮನಕ್ಕೆ ತಂದರು. ಈ ಬಗ್ಗೆ ಚರ್ಚಿಸಲಾಗಿ ಇನ್ನು ಮುಂದಕ್ಕೆ Duplicate ಎಂಬ ಶಬ್ದಕ್ಕೆ ಪರ್ಯಾಯ ಪದವನ್ನು ಬಳಸಿಕೊಂಡು ಶೈಕ್ಷಣಿಕ ದಾಖಲೆಗಳನ್ನು ವಿತರಿಸಲು ಸೂಕ್ತ ಕ್ರಮಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಮಾನ್ಯ ಕುಲಪತಿಗಳು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ಸಹಿ/– | ಸಹಿ/– |
| ಕುಲಸಚಿವರು | ಕುಲಪತಿಗಳು. |